ಭಾರತ ರತ್ನ ಡಾ ಬಿ.ಆರ್ ಅಂಬೇಡ್ಕರ ಜಯಂತಿ

ಹುಬ್ಬಳಿ : ಸ್ಥಳೀಯ ಕೆ.ಎಲ್.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ ಹಾಗೂ ಸ್ನಾತಕೋತ್ತರ ಶಿಕ್ಷಣ ವಿಭಾಗ ವಿದ್ಯಾನಗರ ಹುಬ್ಬಳ್ಳಿಯಲ್ಲಿ ದಿನಾಂಕ ೧೪.೦೪.೨೦೨೨ ರಂದು ಭಾರತ ರತ್ನ ಡಾ ಬಿ.ಆರ್ ಅಂಬೇಡ್ಕರ ಅವರ ೧೩೧ನೇ ಜಯಂತಿಯನ್ನು ವಿಶಿಷ್ಟವಾಗಿ ಆಚರಿಸಲಾಯಿತು. ಇದೇ ಸಂದರ್ಭದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ ಲಿಂಗರಾಜ ಸಿ ಮುಳ್ಳಳ್ಳಿ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ಡಾ ಬಿ.ಆರ್ ಅಂಬೇಡ್ಕರ ಅವರ ಚಿಂತನೆ, ನಂಬಿಕೆ ಸಂವಿಧಾನದ ನಾಲ್ಕು ತತ್ವಗಳು ಹಾಗೂ ಇಂದು ಭಾರತದ ಶಕ್ತಿಯ ಕುರಿತು ಅಭಿಪ್ರಾಯಪಟ್ಟರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ ಬಸವರಾಜ ಪ್ಪಿ ಹಳೇಮನಿ ಅವರು ಡಾ ಬಿ.ಆರ್ ಅಂಬೇಡ್ಕರ ಅವರ ವ್ಯಕ್ತಿತ್ವ ಹಾಗೂ ಭಾರತಕ್ಕೆ ಸಂವಿಧಾನದ ರಚನೆ ಹಾಗೂ ಸಮಾಜಕ್ಕೆ ಕೊಟ್ಟ ಕೊಡುಗೆಗಳ ಕುರಿತು ಪ್ರಶಿಕ್ಷಣಾರ್ಥಿಗಳಿಗೆ ಮನವರಿಕೆ ಮಾಡಿಕೊಟ್ಟರು. ಉಪನ್ಯಾಸಕಿಯರಾದ ಶ್ರೀಮತಿ ಸುಪ್ರೀತಾ ಎಂ.ಬಿ ಅವರ ಪ್ರಾರ್ಥನೆ ಗೀತೆಯೊಂದಿಗೆ ಕಾರ್ಯಕ್ರಮವು ಪ್ರಾರಂಭವಾಯಿತು. ಕಾರ್ಯಕ್ರಮದಲ್ಲಿ ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳಾದ ಕನಕಪ್ಪಾ ಹಾಗೂ ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳಾದ ಪರುಶರಾಮ, ಪವನ, ವಿಜಯ , ಅಶೋಕ ಅವರು ಡಾ ಬಿ.ಆರ್ ಅಂಬೇಡ್ಕರ ಅವರ ಕುರಿತು ಮಾತನಾಡಿದರು. ಉಪನ್ಯಾಸಕರಾದ ವೀರೇಶ ಕಲಕೇರಿ ಕಾರ್ಯಕ್ರಮವನ್ನು ನಿರೂಪಿಸಿದರು. ಕೊನೆಯದಾಗಿ ಉಪನ್ಯಾಸಕರಾದ ಡಾ ಅನೀಲ ಗುಮಗೋಳ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಎಲ್ಲಾ ಬೋಧಕ ಮತ್ತು ಬೋಧಕೇತರ ಸಿಬ್ಬಂಧಿ ವರ್ಗದವರು ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಜರಿದ್ದರು.